ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ವಿಶ್ವವಿದ್ಯಾಲಯಕ್ಕೆ ಮಂಜೂರಾದ ಹುದ್ದೆಗಳು ಮತ್ತು ಖಾಲಿ ಹುದ್ದೆಗಳ ಕುರಿತು

ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

965 (1228) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರಕ್ಕೆ ಸರ್ಕಾರದಿಂದ ಮಂಜೂರಾಗಿರುವ ಅನುದಾನವೆಷ್ಟು ;

(ಆ) ಈ ವಿಶ್ವವಿದ್ಯಾಲಯದ ಕಟ್ಟಡ ಮತ್ತು ಮೂಲಭೂತ ಸೌಕರ್ಯಗಳಿಗೆ ಸರ್ಕಾರದಿಂದ ಮಂಜೂರು ಮಾಡಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಸದರಿ ವಿಶ್ವವಿದ್ಯಾಲಯಕ್ಕೆ ಮಂಜೂರಾಗಿರುವ ಹುದ್ದೆಗಳೆಷ್ಟು ; ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು;

(ಈ) ಸದರಿ ಖಾಲಿ ಹುದ್ದೆಗಳನ್ನು ತುಂಬಲು ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಯಾವುದಾದರೂ ಕ್ರಮ ಕೈಗೊಂಡಿದೆಯೇ ?